# ಮತದಾನ ಜಾಗೃತಿ ನಿಮಿತ್ತ ಮಾನವ ಸರಪಳಿ ಕಾರ್ಯಕ್ರಮ

ಗದಗ ಏಪ್ರಿಲ್ 17: ಲೋಕಸಭಾ ಚುನಾವಣೆಗಳು–2024 ರ ಸಂಬಂಧ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಮೇ–07 ರಂದು ಮತದಾನ ಜರುಗಲಿದ್ದು, ಸಾರ್ವಜನಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರೇರೇಪಿಸುವ ಸಲುವಾಗಿ ಜಿ.ಪಂ. ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರ ನಿರ್ದೇಶನದಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವೀಪ್ ಕಾರ್ಯಕ್ರಮವಾಗಿ ಏಪ್ರಿಲ್ 19 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಯುವ ಮತದಾರರಿಂದ ಮತದಾನದ ಜಾಗೃತಿ ನಿಮಿತ್ಯ ಮಾನವ ಸರಪಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿನ ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು, ಬಿ.ಇ.ಡಿ. ಕಾಲೇಜು ವಿದ್ಯಾರ್ಥಿಗಳು, ಎನ್.ಎಸ್.ಎಸ್. ವಿದ್ಯಾರ್ಥಿಗಳು, ಎನ್.ಸಿ.ಸಿ. ವಿದ್ಯಾರ್ಥಿಗಳು, ಯುವ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ವಿನಂತಿ ಸಲಾಗಿದೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಜಿ.ಪಂ.ಸಿ.ಇ.ಓ, ಜಿಲ್ಲಾ ಪೊ?ಲೀಸ್ ವರಿಷ್ಠಾಧಿಕಾರಿಗಳು ಹಾಗೂ ಗದಗ ಜಿಲ್ಲೆಯ ಚುನಾವಣಾ ರಾಯಭಾರಿಗಳು ಭಾಗವಹಿಸಲಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮಾನ್ಯ ಪ್ರವೇಶ ಪರೀಕ್ಷಾ ಕೇಂದ್ರ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

ಗದಗ ಏಪ್ರಿಲ್ 17: 2024ನೇ ಸಾಲಿನ ಇಂಜನೀಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ, ಬಿ.ಎಸ್.ಸಿ (ನರ್ಸಿಂಗ್) ಮುಂತಾದ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 18 ಮತ್ತು 19 ರಂದು ನಡೆಸಲಿದೆ.

ಜಿಲ್ಲೆಯಲ್ಲಿ ಒಟ್ಟು 12 ಪರೀಕ್ಷಾ ಕೇಂದ್ರಗಳಿದ್ದು ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀಟರ್ ಪರಿಮಿತಿಯೊಳಗೆ ಎಪ್ರಿಲ್ 18 ಮತ್ತು 19 ರಂದು ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 5 ಗಂಟೆಯುವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಫೋಟೋ ಕಾಪಿಯರ್ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಆದೇಶಿಸಿದ್ದಾರೆ.

# ನಾಮಪತ್ರ ಸಲ್ಲಿಕೆ ದಿನದಂದು ವಿಜಯೋತ್ಸವದ ಸಂಭ್ರಮಾಚರಣೆ ಆಚರಿಸಿದ ಬೆಳಗಾವಿ ಜನತೆ




ಬೆಳಗಾವಿ: ಸರ್ವಧರ್ಮ ಸಮಾನ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಬೆಳಗಾವಿ ಅಲ್ಲಿ ಶಕ್ತಿ ಪ್ರದರ್ಶನ ಮಾಡಿದರು

ಬೆಳಗಾವಿಯಲ್ಲಿ ನಾಮಪತ್ರ ಸಲ್ಲಿಕೆ ದಿನದಂದು ವಿಜಯೋತ್ಸವದ ಸಂಭ್ರಮಾಚರಣೆ ಆಚರಿಸಿದ ಬೆಳಗಾವಿ ಜನತೆ ನನಗೆ ಬಹಳ ಖುಷಿ ಆಗುತ್ತಿದ್ದು ಬೆಳಗಾವಿ ಲೋಕಸಭಾ ವಾತಾವರಣ ನೋಡಿದರೆ ಬೆಳಗಾವಿ ಜನರು ನನ್ನನ್ನು ಬಹಳ ಅಂತರದಿಂದ ಗೆಲವನ್ನು ಸಾಧಿಸುತ್ತಾರೆ ಎಂದು ಮಾಜಿ ಉಪ ಮುಖ್ಯಮಂತ್ರಿಯಾದ ಜಗದೀಶ್ ಶೆಟ್ಟರ್ ಅವರು ರ್ಯಾಲಿ ಮುಖಾಂತರ ಮಾತನಾಡಿದರು.ಬೆಳಗಾವಿ ಇಲ್ಲಿನ ಸಮಾದೇವಿ ಗಲ್ಲಿಯಿಂದ ಆರಂಭಗೊಂಡ ರೋಡ್ ಶೋ ಖಡೇಬಜಾರ್, ಶನಿವಾರ ಖೂಟ್, ಕಾಕತಿವೇಸ್ ರಸ್ತೆ, ರಾಣಿ ಚನ್ನಮ್ಮನ ವೃತ್ತದ ಮಾರ್ಗವಾಗಿ ಸಾಗಿ, ಜಿಲ್ಲಾಧಿಕಾರಿ ಕಚೇರಿ ಆವರಣ ತಲುಪಿತು ಬೆಳಗಾವಿ ಜಿಲ್ಲೆಯ ತಾಲೂಕು ನಗರ ವಿವಿಧೆಡೆಯಿಂದ ಅಪಾರ ಸಂಖ್ಯೆಯಲ್ಲಿ ಕಾರ್ಯಕರ್ತರು ಬಂದಿದ್ದರು ಜೈ ಶ್ರೀ ರಾಮ್ ಬೋಲೋ ಭಾರತ್ ಮಾತಾ ಕೀ ಜಯ್ ಪ್ರಧಾನ ನರೇಂದ್ರ ಮೋದಿ ಮತ್ತು ಬಿಜೆಪಿ ಪರವಾಗಿ ಜೈಕಾರಗಳನ್ನು ಕೂಗಿದರು. ಜಾನಪದ ಕಲಾತಂಡಗಳ ಪ್ರದರ್ಶನ ಪಾಂಡುರಂಗ ವಿಠಲನ ಭಜನ ಕುಣಿತ ಡೊಳ್ಳೆ ಕುಣಿತ ಕರಡಿಮಜಲ್ಲೂ ಜಾಂಜಪತಕ್ ವಿವಿಧ ಬಣ್ಣ ಬಣ್ಣದ ಸಮ ವಸ್ತ್ರ ಧರಿಸಿ ಗಮನಸೆಳೆಯಿತು ಮೆರವಣಿಗೆಯಲದ್ಲಿ ಅಭಿಮಾನಗಳ ಜಯ ಘೊಷ ಮುಗಿಲು ಮುಟ್ಟಿತ್ತು. ವಿವಿಧ ಭಾಗದಿಂದ ಬಂದಿದ್ದ ಸಾವಿರಾರು ಕಾರ್ಯಕರ್ತರು ಮೋದಿ ಮೋದಿ ಎಂಬ ಘೋಷಣೆ ಯೊಂದಿಗೆ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಕೇಸರಿ ಪೇಟ ಕೇಸರಿ ಶಾಲು ಧರಿಸಿದ ಸಾವಿರಾರು ಮಹಿಳೆಯರು ಮೆರವಣ 'ಗೆಯಲ್ಲಿ ಗಮನ ಸೆಳೆದರು.ನಾಮಪತ್ರ ಸಲ್ಲಿಕೆಗೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್, ಸಂಸದೆ ಮಂ ಗಲಾ ಅಂಗಡಿ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಶಾಸಕರಾದ ಅಭಯ ಪಾಟೀಲ್, ಬಾಲಚಂದ್ರ ಜಾರಕಿಹೊಳಿ, ದುರ್ಯೋಧನನ ಐಹೊಳೆ, ವಿಧಾನ ಪರಿಷತ್ ಸದಸ್ಯ ಹನಂಮತ್ ನಿರಾಣಿ. ಮಾಜಿ ಶಾಸಕರಾದ ಅನಿಲ ಬೆನಕೆ, ಮಾಜಿ ಸಚಿವ ಮುರಗೇಶ್ ನಿರಾಣಿ, ಮಾಜಿ ರಾಜ್ಯಸಭಾ ಸದಸ್ಯ ಪ್ರಭಾಕರ ಕೋರೆ ಉಪಸ್ಥಿತರಿದ್ದರು.



ಯರಗಟ್ಟಿ: ಸಮೀಪದ ಸತ್ತಿಗೇರಿ ಗ್ರಾಮದ ಗ್ರಾಮದೇವತೆ ಜಾತ್ರಾ ಮಹೋತ್ಸವ ಅಂಗವಾಗಿ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಯರಗಟ್ಟಿ ಇವರ ನೇತೃತ್ವದಲ್ಲಿ ನವ ಚೈತನ್ಯ ದೇವಿಯರ ಮಂಟಪ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನವ ಚೈತನ್ಯ ದೇವಿಯರ ಹಾಗೂ ಈಶ್ವರೀಯ ಸಂದೇಶವನ್ನು ಬಾಗಲಕೋಟೆ ಸೇವಾ ಕೇಂದ್ರದ ಬಿಕೆ ನಾಗರತ್ನಾ ಅಕ್ಕನವರು ತಿಳಿಸಿದರು. ಈ ಸಂದರ್ಭದಲ್ಲಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು, ಅತಿಥಿಗಳಾಗಿ ಎಂ.ಕೆ ಹುಬ್ಬಳ್ಳಿಯ ರಾಜಯೋಗಿನಿ ಬ್ರಹ್ಮಾಕುಮಾರಿ ಜ್ಯೋತಿ ಅಕ್ಕನವರು, ಯರಗಟ್ಟಿಯ ರಾಜಯೋಗಿನಿ ಬ್ರಹ್ಮಾಕುಮಾರಿ ಜಯಶ್ರೀ ಅಕ್ಕನವರು ಸೇರಿದಂತೆ ಅನೇಕ ಇದ್ದರು.

# ಶ್ರೀ ಸಾಯಿ ಜಯಂತಿ ಮತ್ತು ಶ್ರೀ ರಾಮ ನವಮಿ ಆಚರಣೆ

ಬೆಳಗಾವಿ–ಎ.17– ನಗರದ ವಂಟಮುರಿ ಕಾಲೊನಿಯ ಶ್ರೀಸಾಯಿ ಮಂದಿರದಲ್ಲಿ ಇಂದು ಶ್ರೀ ರಾಮ ನವಮಿ ಮತ್ತು ಶ್ರೀಸಾಯಿ ಜಯಂತಿಯನ್ನ ಸಾಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜ್ರುಂಭಣೆಯಿಂದ ಜರುಗಿತು, ಬೆಳಿಗ್ಗೆ 6 ಗಂಟೆಗೆ ಅಭಿಷೇಕ ನಡೆಯಿತು ಮಧ್ಯಾಹ್ನ 12 ಗಂಟೆಗೆ ಶ್ರೀರಾಮ ಮತ್ತು ಶ್ರೀ ಸಾಯಿನಾಥರನ್ನ ತೂಟ್ಟಲಿನಲ್ಲಿ ಹಾಕಲಾಯಿತು. ಮಧ್ಯಾಹ್ನ 1 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮಹಾ ಪ್ರಸಾದ ಅನ್ನ ಸಂತರ್ಪಣೆ ನಡೆಯಿತು ನಗರದ ಅನೇಕ ಭಾಗಗಳಿಂದ ಮತ್ತು ಹಲವು ಗ್ರಾಮಗಳಿಂದ ಆಗಮಿಸಿದ ಸುಮಾರ ಏಳು ಸಾವಿರಕ್ಕು ಅದಿಕ ಭಕ್ತರು ದೇವರ ದರ್ಶನ ಪಡೆದು ತೊಟ್ಟಲು ತೂಗಿ ಮಹಾ ಪ್ರಸಾದ ಸ್ವೀಕರಿಸಿದರು. ವಿಶೇಷ ಪೋಜೆಗಳು ನಡಯಿತು ದೇವರನ್ನ ಮತ್ತು ದೇವಸ್ಥಾನವನ್ನ ವಿಶೇಷವಾಗಿ ಅಲಂಕರಿಸಲಾಗಿತ್ತು ಭಕ್ತರು ಜೈ ಶ್ರೀ ರಾಮ ಘೋಷಣೆಗಳನ್ನ ಕೊಗುತ್ತ ಭಕ್ತಿಯನ್ನ ಸರ್ಮಪಿಸಿದರು. ಸಾಹಸ್ರಾರು ಮಹಿಳೆಯರಿಗೆ ದೇವಸ್ಥಾನದವತಿಯಿಂದ ಉಡಿ ತುಂಬಲಾಯಿತು.



# 'ಬಾಲ್ಯದ ಆಟ ಆ ಹುಡುಗಾಟ' ಕಾರ್ಯಕ್ರಮ

## ಮೂರು ವರ್ಷಕ್ಕೆ ಕಲಿತದ್ದು ನೂರು ವರ್ಷ ತನಕ : ಪ್ರೊ. ಜಿ. ಕೆ. ಕುಲಕರ್ಣಿ



ಬೆಳಗಾವಿ 17– ಬಾಲ್ಯದಲ್ಲಿ ಕಲಿತ ವಿಷಯಗಳು ಕೊನೆಯ ತನಕ ಉಳಿಯುತ್ತವೆ. ಅವು ಹಸಿ ಗೋಡೆಯ ಮೇಲೆ ಕಲ್ಲು ಒಗೆದಂತೆ ಗಟ್ಟಿಯಾಗಿ ಕುಳಿತುಬಿಡುತ್ತವೆ. ಬಾಲ್ಯದಲ್ಲಿ ಕಲಿಯುವಾಗಲೇ ಒಳ್ಳೆಯದನ್ನು ಸರಿಯಾದುದನ್ನು ಕಲಿಯಬೇಕು. ಮೂರು ವರ್ಷಕ್ಕೆ ಕಲಿತದ್ದು ನೂರು ವರ್ಷ ತನಕ ಎಂದು ಖ್ಯಾತ ನಗೆ ಮಾತುಗಾರ ಪ್ರೊ. ಜಿ. ಕೆ. ಕುಲಕರ್ಣಿಯವರು ಇಂದಿಲ್ಲಿ ಹೇಳಿದರು. ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ.13 ಶನಿವಾರದಂದು ಚೆನ್ನಮ್ಮವೃತ್ತದ ಬಳಿಯಿರುವ ಕನ್ನಡ ಸಾಹಿತ್ಯಭವನದಲ್ಲಿ 'ಬಾಲ್ಯದ ಆಟ ಆ ಹುಡುಗಾಟ' ಎಂಬ ವಿಶೇಷ ಕಾರ್ಯಕ್ರಮದಲ್ಲಿ ಪ್ರಮುಖ ಭಾಷಣಕಾರರಾಗಿ ಆಗಮಿಸಿದ್ದ ಕುಲಕರ್ಣಿಯವರು ಮೇಲಿನಂತೆ ಹೇಳಿದರು. ಅವರ ಹೆಸರನ್ನು ಕೇಳಿದಾಗ ಪ್ರೊ. ಕುಲಕರ್ಣಿಯವರು ತಮ್ಮ ಹೆಸರನ್ನು ಹೇಳುತಿದ್ದ ರೀತಿಯಿಂದ ಆದ ಅನಾಹುತದ ಪ್ರಸಂಗವನ್ನು ಹೇಳಿ ಜನರ ನಗೆ ಮುಗಿಲು ಮುಟ್ಟಿಸಿದರು.ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ಪತ್ರಕರ್ತ ಲೇಖಕ ಎಲ್. ಎಸ್. ಶಾಸ್ತ್ರಿ, 'ಮನಸ್ಸಿಗೆ ಮುಪ್ಪಾಗುವವರೆಗೆ ದೇಹಕ್ಕೆ ಮುಪ್ಪಿಲ್ಲ. ಅಂದಿನ ಮಕ್ಕಳಗಿದ್ದ ಮುಕ್ತ ವಾತಾವರಣ ಇಂದಿನ ಮಕ್ಕಳಲ್ಲಿ ಕಾಣಸಿಗುವುದಿಲ್ಲವಾದ್ದರಿಂದ ಸಹಜವಾಗಿಯೇ ಮಕ್ಕಳಲ್ಲಿ ಅಂದಿನ ಹುಡುಗಾಟ, ತುಂಟಾವನ್ನು ಇಂದಿನ ಮಕ್ಕಳಲ್ಲಿ ಕಾಣುವುದಿಲ್ಲ. ಸಹಜವಾಗಿಯೇ ಇಂದಿನ ಯಾಂತ್ರಿಕ ಯುಗದಲ್ಲಿ ಮಕ್ಕಳಲ್ಲಿ ಮೊದಲಿದ್ದ ಸ್ವಾತಂತ್ರ್ಯವಿಲ್ಲ. ಮನಸ್ಸಿಗೆ ವಯಸ್ಸಾಗುವವರೆಗೆ ದೇಹಕ್ಕೆ ಮುಪ್ಪಿಲ್ಲ ಎಂದು ಹೇಳಿದರು.ಡಾ. ಭಾರತಿ ಮಠದ, ಶ್ರೀಮತಿ ರಾಜನಂದಾ ಗಾರ್ಗಿ, ಎಸ್. ವಿ. ದೀಕ್ಷಿತ ಬಾಲ್ಯದಲ್ಲಿ ತಮಗಾದ ರಸಪ್ರಸಂಗಗಳನ್ನು ಹಂಚಿಕೊಂಡರು. ಪ್ರಾ. ವ್ಹಿ. ಎನ್. ಜೋಶಿ ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿಕೊಂಡಿದ್ದರು. ಪ್ರಾಸ್ತಾವಿಕ ನುಡಿಗಳನ್ನು ಗುಂಡೇನಟ್ಟಿ ಮಧುಕರ ಆಡಿದರು. ಜಿ. ಎಸ್. ಸೋನಾರ ನಿರೂಪಿಸಿದರು.ಡಾ. ಭಾರತಿ ಮಠದ, ಶ್ರೀಮತಿ ರಾಜನಂದಾ ಗಾರ್ಗಿ, ಎಸ್. ವಿ. ದೀಕ್ಷಿತ ಬಾಲ್ಯದಲ್ಲಿ ತಮಗಾದ ರಸಪ್ರಸಂಗಗಳನ್ನು ಹಂಚಿಕೊಂಡರು. ಪ್ರಾ. ವ್ಹಿ. ಎನ್. ಜೋಶಿ ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿಕೊಂಡಿದ್ದರು. ಪ್ರಾಸ್ತಾವಿಕ ನುಡಿಗಳನ್ನು ಗುಂಡೇನಟ್ಟಿ ಮಧುಕರ ಆಡಿದರು. ಜಿ. ಎಸ್. ಸೋನಾರ ನಿರೂಪಿಸಿದರು.

# ಬಾಬಾಸಾಹೇಬ ಅಂಬೇಡ್ಕರ ಅವರ ತತ್ವಾದರ್ಶ ಪಾಲಿಸಿ



ಯಮಕನಮರಡಿ 17; ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ಅವರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಡೆಯಬೇಕು ಎಂದು ಯುವ ಧುರೀಣರಾದ ರಾಹುಲ ಜಾರಕಿಹೊಳಿ ಹೇಳಿದರು.ಅವರು ದಿ. 14 ರಂದು ವ್ಹಿಜನ ಆಪ್ ಅಂಬೇಡ್ಕರ ಪೌಂಡೇಶನ ಬೆಳಗಾವಿ ಬ್ಲಡ ಬ್ಯಾಂಕ ಮತ್ತು ಮುರಗೋಡ ಮೆಮೊರಿಯಲ ಎಂ.ಎಂ. ಜೋಶಿ ಇನ್ಸಟ್ಯೂಟ ಇವುಗಳ ಸಹಯೋಗದಲ್ಲಿ ಆಯೋಜಿಸಿದ ರಕ್ತದಾನ ಶಿಬಿರ ಮತ್ತು ಕಣ್ಣು ತಪಾಸಣೆ ಶಿಬಿರ ವಿಕ್ಷಿಸಿದ ನಂತರ ಹತ್ತರಗಿಯಲ್ಲಿ ಮಾತನಾಡಿದರು. ಡಾ. ಬಾಬಾಸಾಹೇಬ ಅವರ ರಚಿಸಿದ ಸಂವಿಧಾನ ಮೂಲಕ ಸಮಾನತೆ, ಮತದಾನ ಹಕ್ಕು ದೊರೆಕಿದೆ ಸಂವಿಧಾನ ರಕ್ಷಣೆ ಮಾಡುವುದು ಇಂದು ಅನರ್ವಾವಾಗಿದೆ ಕೆಲವರು ಸಂವಿದಾನ ಬದಲಾಯಿಸಲು ಹುನ್ನಾರ ನಡೆಸಿದ್ದಾರೆ. ವ್ಹಿಜನ ಆಪ್ ಪೌಂಡೇಶನ ಸಂಸ್ಥಾಪಕ ಅಧ್ಯಕ್ಷ ಉಮೇಶ ಭೀಮಗೋಳ ಇವರ ನೇತ್ರತ್ವದಲ್ಲಿ ಸಾಮಾಜಿಕ ಕಾರ್ಯಗಳು ಕೈಗೊಂಡಿ ರುವುದು ಶ್ಲಾಘನೀಯವಾ ದದು ಎಂದರು. ಈ ವೇಳೆಯಲ್ಲಿ ರವೀಂದ್ರ ಜಿಂಡ್ರಾಳಿ, ಕಿರಣಸಿಂಗ ರಜಪೂತ ಮಹಾಂತೇಶ ಮಗದುಮ್ಮ ಹತ್ತರಗಿ ಗ್ರಾ.ಪಂ. ಮಾಜಿ ಅಧ್ಯಕ್ಷ ಮಹಾದೇವ ಪಟೋಳಿ, ವ್ಹಿಜನ ಆಪ್ ಅಂಬೇಡ್ಕರ ಪೌಂಡೇಶನ ಸಂಸ್ಥಾಪಕ ಅಧ್ಯಕ್ಷ ಉಮೇಶ ಭೀಮ ಗೋಳ, ಅಕ್ಷಯ ವೀರಮುಖ ಗಣಪತಿ ಕಾಂಬಳೆ, ಅಶೋಕ ತಳವಾರ, ಪರಶುರಾಮ ತಳವಾರ, ಪರಶುರಾಮ ದಂಡಗಿದಾಸ, ಪ್ರಕಾಶ ಕೋಳಿ, ದಯಾನಂದ ತಿಮ್ಮನವರ, ಶಿವಾನಂದ ತಳವಾರ, ಸಂತೋಷ ಬೀಮ ಗೋಳ, ಆನಂದ ರಾಯನ್ನವರ, ಪರಶುರಾಮ ಕಾಂಬಳೆ, ಮುಂತಾದವರು ಇದ್ದರು.

# ಮೇಣದ ಬತ್ತಿ ಹಿಡಿದು ಮತದಾನ ಜಾಗೃತಿ




ಯಮಕನಮರಡಿ 17; ಲೋಕಸಭಾ ಚುನಾವಣೆ ಅಂಗವಾಗಿ ಮಂಗಳವಾರ ರಾತ್ರಿ ಹುಕ್ಕೇರಿ ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಟಿ.ಆರ್. ಮಲ್ಲಾಡ ಇವರ ಅಧ್ಯಕ್ಷತೆಯಲ್ಲಿ ಯಮಕನಮರಡಿ ಗ್ರಾಮದಲ್ಲಿ ಮೇಣದಬತ್ತಿ ಹಿಡಿದು ಜಾಗೃತಿ ಜಾಥಾ ಮೂಲಕ ಗ್ರಾಮಸ್ಥರಿಗೆ ಮತದಾನ ಜಾಗೃತಿ ಮಾಡಿಸಲಾಯಿತು. ಹುಕ್ಕೇರಿ ತಾ.ಪಂ. ಅಧಿಕಾರಿ ಸ್ವೀಪ ಸಮಿತಿ ಅಧ್ಯಕ್ಷ ಟಿ.ಆರ್. ಮಲ್ಲಾಡ ಮಾತನಾಡಿ ಮೇ 07 ರಂದು ಮತದಾನ ನಡೆಯಲಿದ್ದು, ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಿಡಿಓಗಳಾದ ಎಸ್.ಎಸ್. ಡಂಗ, ಆನಂದ ಹೊಳೆನ್ನವರ, ಅಂಗನವಾಡಿ/ಆಶಾ ಕಾರ್ಯಕರ್ತೆಯರು ನರೇಗಾ ಕೂಲಿಕಾರರು ಸ್ವಸಹಾಯ ಸಂಘಗಳ ಸದಸ್ಯರು ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ವೇಗವಾಗಿ ಬೆಳೆಯುತ್ತಿರುವ ಬೆಳಗಾವಿಗೆ ಕೆಲಸ ಮಾಡುವ ಸಂಸದ ಬೇಕು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಮಹಾಂತೇಶ್ ನಗರ, ಕಣಬರ್ಗಿಯಲ್ಲಿ ಮೃಣಾಲ ಹೆಬ್ಬಾಳಕರ್ ಪರ ಮತಯಾಚನೆ

ಬೆಳಗಾವಿ: ವೇಗವಾಗಿ ಬೆಳೆಯುತ್ತಿರುವ ಬೆಳಗಾವಿಗೆ ನಗರಕ್ಕೆ ಅಷ್ಟೇ ವೇಗವಾಗಿ ಕೆಲಸ ನಿರ್ವಹಿಸುವ ಸಂಸದ ಬೇಕು. ಹಾಗಾಗಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಮನವಿ ಮಾಡಿದರು.

ಮಹಾಂತೇಶ್ ನಗರದ ಮಹಾಂತ್ ಭವನದಲ್ಲಿ ಮಂಗಳವಾರ ನಡೆದ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ ಸಚಿವರು, ಬೆಳಗಾವಿ ಎಲ್ಲಾ ದಿಕ್ಕಿನಲ್ಲಿ ಬೆಳೆಯುತ್ತಿದೆ. ಬೆಳೆಯುತ್ತಿರುವ ಬೆಳಗಾವಿಗೆ ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ತರಬೇಕಾಗಿದೆ. ಇಲ್ಲಿನ ಯುವಕರಿಗೆ ಉದ್ಯೋವಕಾಶ ಕಲ್ಪಿಸಬೇಕಿದೆ. ಹೀಗಾಗಿ ಉತ್ಸಾಹದಿಂದ ಕೆಲಸ ಮಾಡಲು ಸಂಸದ ಬೇಕು. ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಬೆಳಗಾವಿ ಮೇಲೆ ಅಭಿಮಾನವೂ ಇಲ್ಲ. ಕೆಲಸ ಮಾಡುವ ಹಸಿವೂ ಇಲ್ಲ. ಅಂತಹವರನ್ನು ತಿರಸ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿಯನ್ನು ಆಯ್ಕೆ ಮಾಡಿ ಎಂದು ಕರೆ ನೀಡಿದರು.

ಕರ್ನಾಟಕ ಸರ್ಕಾರ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ಪ್ರಮಾಣಿಕವಾಗಿ ತಲುಪಿಸಲಾಗುತ್ತಿದೆ. ಸುಮಾರು 1.20 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆ ತಲುಪುತ್ತಿವೆ. ಇದು ವಿಶ್ವದಲ್ಲಿಯೇ ಮಾದರಿಯಾದ ಯೋಜನೆ. ಸರ್ವರನ್ನು ಬಸವಣ್ಣನವರ ಸಮಾನತೆಯ




ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಜಾರಿಗೆ ತಂದ ಯೋಜನೆ ಇದಾಗಿದೆ ಎಂದು ಸಚಿವರು ಹೇಳಿದರು.

ಮನೆಯಲ್ಲಿ ಕೂರದೆ ಎಲ್ಲರೂ ಮತದಾನ ಮಾಡಿ, ಬೆಳಗಾವಿ ಸ್ವಾಭಿಮಾನ ಉಳಿಸೋಣ. ಬೆಳಗಾವಿ ಜನರ ಕಷ್ಟ ಸುಖಗಳ ಬಗ್ಗೆ ಅರಿತಿರುವ ಅಭ್ಯರ್ಥಿಯನ್ನು ಬೆಂಬಲಿಸೋಣ. ಬದ್ದತೆ ಇಲ್ಲದ ಬಿಜೆಪಿ ಅಭ್ಯರ್ಥಿ ಕಣದಲ್ಲಿದ್ದು, ಅವರಲ್ಲಿ ಸಾಕಷ್ಟು ಗೊಂದಲವಿದೆ. ಪಕ್ಷಾತೀತವಾಗಿ ಎಲ್ಲರೂ ಮೃಣಾಲ್ ಬೆಂಬಲಿಸಿ ಎಂದು ಸಚಿವರು ಹೇಳಿದರು. ಬೆಳಗಾವಿ ಇನ್ನೂ ಬೆಳೆಯಬೇಕು. ಮೆಟ್ರೋ, ಫ್ಲೈಓವರ್, ಕೈಗಾರಿಕೆಗಳು ಬರಬೇಕು ಎಂದರು.

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮುಖ್ಯಮಂತ್ರಿ ಆಗಿ ಎರಡು ಬಾರಿ ಉಸ್ತುವಾರಿ ಸಚಿವರಾಗಿ, ವಿರೋಧ ಪಕ್ಷದ ನಾಯಕನಾಗಿ ಕೆಲಸ ಮಾಡಿದರೂ ಅಭಿವೃದ್ಧಿ ಬಗ್ಗೆ ಚಿಂತಿಸದೆ ನಿರ್ಲಕ್ಷ್ಯ ವಹಿಸಿದರು. ಶೆಟ್ಟರ್ ಅವರಿಗೆ ಅಭಿವೃದ್ಧಿ ಮಾಡೋಕೆ ಬರಲ್ಲ. ಬಿಜೆಪಿ ಅಭ್ಯರ್ಥಿಗೆ ಇಲ್ಲಿ ಮತ ಕೇಳಲು ನೈತಿಕತೆ ಇದೆಯೇ? ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಜಗದೀಶ್ ಶೆಟ್ಟರ್ ಬೆಳಗಾವಿಗೆ ಸಾಕಷ್ಟು ಅನ್ಯಾಯ ಮಾಡಿದ್ದಾರೆ. ಅವರು ಕೈಗಾರಿಕೆ ಸಚಿವರಾಗಿದ್ದಾಗ ಬೆಂಗಳೂರಿನಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ನಾನೂ ಭಾಗವಹಿಸಿದ್ದೆ. ಆಗ ಅವರ ಲಕ್ಷ್ಯ ಕೇವಲ ಹುಬ್ಬಳ್ಳಿ – ಧಾರವಾಡದ ಮೇಲಿತ್ತು. ನಾನು ಬೆಳಗಾವಿ ಬಗ್ಗೆ ಹೇಳಲು ಹೋದರೆ ನನ್ನ ಮೇಲೆ ಕೋಪಿಸಿಕೊಂಡರು. ಬೆಳಗಾವಿಗೆ ಏನೇ ಬಂದರೂ ಅಡ್ಡಗಾಲು ಹಾಕುವ ಚಾಲಿ ಅವರದ್ದಾಗಿತ್ತು. ಈಗ ಬೆಳಗಾವಿ ನನ್ನ ಕರ್ಮ ಭೂಮಿ ಎನ್ನುತ್ತಿದ್ದಾರೆ ಎಂದು ಟೀಕಿಸಿದರು.

ಶಾಸಕ ಫಿರೋಜ್ ಸೇಠ್ ಮಾತನಾಡಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಉತ್ತಮ ರೀತಿಯಿಂದ ಕೆಲಸ ಮಾಡುತ್ತಿದ್ದಾರೆ. ಪುತ್ರ ಮೃಣಾಲ ಕೂಡ ಅವರದೇ ಮಾದರಿಯಲ್ಲಿ ಕೆಲಸ ಮಾಡಲಿದ್ದಾನೆ. ಹಾಗಾಗಿ ನಾವೆಲ್ಲ ಅವರಿಗೆ ಹೆಚ್ಚಿನ ಮತ ನೀಡಿ ಆಯ್ಕೆ ಮಾಡೋಣ. ಎಲ್ಲರೂ ಸೇರಿ ಬೆಳಗಾವಿಯನ್ನು ಅಭಿವೃದ್ಧಿಪಡಿಸೋಣ ಎಂದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಆಮ್ ಆದ್ಮಿ ಪಕ್ಷದ ಗಿರೀಶ್ ಬಾಳೆಕುಂದ್ರಿ, ದಿನೇಶ ಬಾಳೆಕುಂದ್ರಿ, ಆರ್.ಪಿ.ಪಾಟೀಲ ಮೊದಲಾದವರು ಮಾತನಾಡಿದರು. ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ಮಾಜಿ ಸಚಿವ ಶಶಿಕಾಂತ್ ನಾಯಕ್, ಬೆಳಗಾವಿ ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಎಸ್.ಕಿವುಡಸಣ್ಣನವರ, ಮಾಜಿ ಮೇಯರ್ ಎನ್.ಬಿ.ನಿರ್ವಾಣಿ, ಮಾಜಿ ಉಪ ಮೇಯರ್ ಜ್ಯೋತಿ ಭಾವಿಕಟ್ಟಿ, ಮಾಜಿ ಕಾರ್ಪೋರೇಟರ್ ಅನುಶ್ರೀ ದೇಶಪಾಂಡೆ, ಪುಷ್ಪ ಪರ್ವತರಾವ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26